ವಿಷಯ : ಗುಳೇದಗುಡ್ಡ ನಗರದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ

240 (1950)-ಶ್ರೀ ರಾಜಶೇಖರ್ ಶೀಲವಂತ (ಗುಳೇದಗುಡ್ಡ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಗುಳೇದಗುಡ್ಡ ನಗರದಲ್ಲಿ ಡಾ।। ಅಂಬೇಡ್ಕರ್ ಭವನ ನಿರ್ಮಿಸುವ ಯೋಜನೆ ಸರ್ಕಾರಕ್ಕಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ.

ಇ) ಸದರಿ ಅಂಬೇಡ್ಕರ್ ಭವನದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಯಾವಾಗ ಪೂರ್ಣಗೊಳಿಸಲಾಗುವುದು.

ಶ್ರೀ ಕೆ. ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು)

ಅ) ಬಿಜಾಪುರ ಜಿಲ್ಲೆ ಬಾದಾಮಿ ತಾಲ್ಲೂಕು ಗುಳೇದಗುಡ್ಡದಲ್ಲಿ ಮಿನಿ ಅಂಬೇಡ್ಕರ್ ಭವನವನ್ನು ನಿರ್ಮಿಸಲು ಸರ್ಕಾರಿ ಆದೇಶ ಸಂಖ್ಯೆ. ಸಕಇ400 ಪಕವಿ 94:ದಿನಾಂಕ 29-12-95ರಲ್ಲಿ ಮಂಜೂರಾತಿಯಾಗಿದೆ.

ಆ) ಮೇಲೆ ತಿಳಿಸಿರುವ ಸರ್ಕಾರಿ ಆದೇಶದನ್ವಯ ಗುಳೇದಗುಡ್ಡದಲ್ಲಿ ನಿರ್ಮಿಸಲಾಗುವ ಮಿನಿ ಅಂಬೇಡ್ಕರ್ ಭವನಕ್ಕೆ 3.00ಲಕ್ಷ ರೂ.ಗಳು ಮಂಜೂರಾಗಿದ್ದು, ಮೊದಲನೇ ಕಂತು 83,000 ರೂ.ಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು ಬಿಜಾಪುರ ಇವರಿಗೆ ಬಿಡುಗಡೆ ಮಾಡಲಾಗಿದೆ.

ಇ) ಕಟ್ಟಡದ ನಿರ್ಮಾಣದ ಕೆಲಸವನ್ನು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದವರು ಪ್ರಾರಂಭಿಸಬೇಕಿದ್ದು, ಅಗತ್ಯ ಸಾಮಗ್ರಿಗಳನ್ನು ಸಂಗ್ರಹಿಸಿದ್ದು, ಕೆಲಸವನ್ನು ಕೂಡಲೇ ಪ್ರಾರಂಭಿಸಲಾಗುವುದೆಂದು ತಿಳಿಸಿರುತ್ತಾರೆ. 1997-98ನೇ ಸಾಲಿನಲ್ಲಿ ಕಟ್ಟಡದ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಶ್ರೀ ರಾಜಶೇಖರ್ ಶೀಲವಂತ : ಸನ್ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಕೊಟ್ಟಿರುವಂಥ ಉತ್ತರದಲ್ಲಿ ಆ ಕಾಮಗಾರಿಯನ್ನು ಸಂಪೂರ್ಣವಾಗಿ ಮಾಡಲಿಕ್ಕೆ ತಿಳಿಸಿದ್ದೇನೆಂದು ಹೇಳಿರುವುದಕ್ಕೆ ಬಹಳ ಧನ್ಯವಾದಗಳು. ತಿಳಿಸಿರುವಂಥ ಅವಧಿಯೊಳಗೆ ಕೆಲಸ ಆಗುವುದಕ್ಕೆ ಮಾನ್ಯ ಸಚಿವರು ಕ್ರಮ ತೆಗೆದುಕೊಳ್ಳಬೇಕೆಂದು ಈ ಮೂಲಕ ಮಾನ್ಯ ಸಚಿವರಲ್ಲಿ ಕೇಳಿಕೊಳ್ಳುತ್ತೇನೆ.

ಶ್ರೀ ಕೆ. ಎಂ. ಕೃಷ್ಣಾರೆಡ್ಡಿ : ಮಾನ್ಯ ಅಧ್ಯಕ್ಷರೆ, ತಿಳಿಸಿರುವ ಅವಧಿಯೊಳಗೆ ಕೆಲಸ ಮಾಡಿಸಿಕೊಡಲಾಗುತ್ತದೆಂದು ಮಾನ್ಯ ಸದಸ್ಯರಿಗೆ ನಾನು ಆಶ್ವಾಸನೆಯನ್ನು ಕೊಡುತ್ತೇನೆ.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಸಿ. ಭೈರೇಗೌಡ (ಕೃಷಿ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 16ನೇ ಪಟ್ಟಿಯಲ್ಲಿರುವ 83 ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪೈಕಿ 70 ಪ್ರಶ್ನೆಗಳಿಗೆ ಉತ್ತರವನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ವಿಷಯ : ಭದ್ರವತಿಯ ವಿ.ಐ.ಎಸ್.ಎಲ್. ಹಸ್ತಾಂತರ

1399 (1944)-ಶ್ರೀ ಆಯನೂರು ಮಂಜುನಾಥ (ಹೊಸನಗರ) : ಮಾನ್ಯ ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಸ್ಟೀಲ್ ನಿಯಮಿತ ಕಬ್ಬಿಣ ಕಾರ್ಖಾನೆಯನ್ನು ಭಾರತ ಉಕ್ಕು ಪ್ರಾಧಿಕಾರ ನಿಯಮಿತದವರಿಗೆ ಸಂಪೂರ್ಣವಾಗಿ ಹಸ್ತಾಂತರಿಸಲು ರಾಜ್ಯ ಸರ್ಕಾರದಿಂದ ನಿರ್ಧರಿಸಲಾಗಿದೆಯೇ

ಆ) ಹಾಗಿದ್ದಲ್ಲಿ, ಹಸ್ತಾಂತರದ ಪ್ರಕ್ರಿಯೆಯು ಯಾವ ಹಂತದಲ್ಲಿದೆ, ಯಾವಾಗ ಈ ಕೆಲಸ ಪೂರ್ಣಗೊಳ್ಳುವುದು?

ಶ್ರೀ ಆರ್. ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಹಾಗೂ ಸಂಪನ್ಮೂಲ ಅಭಿವೃದ್ಧಿ ಸಚಿವರು)

ಅ) ಹೌದು.

ಆ) ಈ ಬಗ್ಗೆ ರಾಜ್ಯ ಸರ್ಕಾರವು ಈ ವಿಷಯದಲ್ಲಿ ಭಾರತ ಸರ್ಕಾರ ವಿ.ಐ.ಎಸ್.ಎಲ್. ಮತ್ತು ಭಾರತ ಉಕ್ಕು ಪ್ರಾಧಿಕಾರ ನಿಯಮಿತಗೊಂಡಿದೆ. ಒಂದು ಒಡಂಬಡಿಕೆ ಮಾಡಿಕೊಳ್ಳಲು ಉದ್ದೇಶಿಸಿದ್ದು, ಒಡಂಬಡಿಕೆ ಆದ ತಕ್ಷಣ ಹಸ್ತಾಂತರದಿಂದ ವಿಧಾನ ಪೂರ್ಣಗೊಳಿಸಲಗುವುದು.